# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | : | **426** |
| **ಮಾನ್ಯ ಸದಸ್ಯರ ಹೆಸರು** | : | **ಶ್ರೀ ಕಿಶೋರ್ ಕುಮಾರ್ ಪುತ್ತೂರು (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)** |
| **ಉತ್ತರಿಸುವ ದಿನಾಂಕ** | : | **12-12-2024** |
| **ಉತ್ತರಿಸುವ ಸಚಿವರು** | : | **ಗೃಹ ಸಚಿವರು** |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸೈಬರ್ ಆರ್ಥಿಕ ವಂಚನೆಗೆ ಸಂಬಂಧಿಸಿದಂತೆ ಪ್ರಸ್ತುತ ಸಾಲಿನಲ್ಲಿ ನಡೆದ ಅಪರಾಧ ಪ್ರಕರಣ ದಾಖಲಾದ ಪ್ರಕರಣ ಮತ್ತು ಪತ್ತೆಯಾದ ಪ್ರಕರಣಗಳು ಎಷ್ಟು ಮತ್ತು ಅವುಗಳ ಮೊತ್ತ ಎಷ್ಟು; | ದಕ್ಷಿಣ ಕನ್ನಡ ಜಿಲ್ಲೆ ಮತ್ತು ಉಡುಪಿ ಜಿಲ್ಲೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಸೈಬರ್ ಆರ್ಥಿಕ ವಂಚನೆಗೆ ಸಂಬಂಧಿಸಿದಂತೆ ಪ್ರಸ್ತುತ ಸಾಲಿನಲ್ಲಿ ದಾಖಲಾದ ಪ್ರಕರಣಗಳ ಮಾಹಿತಿ ಈ ಕೆಳಗಿನಂತಿದೆ. (see table below) |
| (ಆ) | ಸೈಬರ್ ಅಪರಾಧ ನಡೆದ ತಕ್ಷಣ ಪತ್ತೆಗೆ ಕ್ರಮ ಕೈಗೊಳ್ಳುವ ನಿಟ್ಟಿನಲ್ಲಿ ಪೊಲೀಸರಿಗೆ ಯಾವ ರೀತಿಯ ತಾಂತ್ರಿಕ ತರಬೇತಿ ಮತ್ತು ಸೌಲಭ್ಯ ನೀಡಲಾಗಿದೆ: (ಮಾಹಿತಿ ನೀಡುವುದು) | ❖ ಸೈಬರ್ ಕ್ರೈಂ ಪ್ರಕರಣಗಳನ್ನು ಪತ್ತೆ ಹಚ್ಚಲು ಪೊಲೀಸರಿಗೆ ಆಧುನಿಕ ತಂತ್ರಜ್ಞಾನದ ಕುರಿತಂತೆ ಇಲಾಖಾ ವತಿಯಿಂದ ವಿಶೇಷ ತರಬೇತಿಯನ್ನು ನೀಡಲಾಗುತ್ತಿದೆ.<br>❖ ಸಿಸಿಐಟಿಆರ್ (Centre for Cybercrime Investigation Training & Research) ಘಟಕ ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದ್ದಾರೆ.<br>❖ ಸೈಬರ್ ಅಪರಾಧಗಳ ಬಗ್ಗೆ ಪೊಲೀಸ್ ಸಿಬ್ಬಂದಿಯವರಿಗೆ ಲೆವೆಲ್-1, ಲೆವೆಲ್-2, ಡ್ರೋನ್, ಸಿಮೆಕ್ಸ್, ಬಿಟ್ ಕಾಯಿನ್, ಡ್ರೋನ್ ಫಾರೆನ್ಸಿಕ್ ಮುಂತಾದ ತರಬೇತಿಯನ್ನು ನೀಡಲಾಗಿದೆ.<br>❖ ಸೈಬರ್ ಕ್ರೈಂ (Cyber Investigation Manual) ಅಪರಾಧ ಮತ್ತು ತನಿಖೆಗಾಗಿ ಸಂಬಂಧಿಸಿದಂ ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ. |

| ಜಿಲ್ಲೆಯ ಹೆಸರು | ದಾಖಲಾದ ಪ್ರಕರಣಗಳ ಸಂಖ್ಯೆ | ಪತ್ತೆಯಾದ ಪ್ರಕರಣಗಳ ಸಂಖ್ಯೆ | ಸೈಬರ್ ಆರ್ಥಿಕ ವಂಚನೆಯಿಂದ ಕಳೆದುಕೊಂಡ ಮೊತ್ತ | ಪತ್ತೆಯಾದ ಮೊತ್ತ |
|---|---|---|---|---|
| ದಕ್ಷಿಣ ಕನ್ನಡ ಜಿಲ್ಲೆ | 89 | 04 | 7,83,07,985/- | 84,73,740/- |
| ಉಡುಪಿ ಜಿಲ್ಲೆ | 187 | 05 | 19,15,49,547/- | 40,15,800/- |

| | | |
|---|---|---|
| | | ❖ ಸೈಬರ್ ಕ್ರೈಂ ನಿಂದ ವಂಚಿತರಾದವರು ದೂರನ್ನು ನೀಡಲು ಸಹಾಯವಾಣಿ 1930 ಅನ್ನು ತೆರೆಯಲಾಗಿದ್ದು, ಅದರಂತೆಯೆ ಆನ್‌ಲೈನ್ ಮೂಲಕ ದೂರು ದಾಖಲಿಸಲು www.cybercrime.gov.in ವೆಬ್-ಸೈಟ್ ಅನ್ನು ತೆರೆಯಲಾಗಿದೆ.<br><br>❖ ಗ್ರಾಮೀಣ ಪ್ರದೇಶದಲ್ಲಿ ಜನರು ಸೈಬರ್ ವಂಚನೆಗೊಳಗಾದಲ್ಲಿ ಸ್ಥಳೀಯ ಠಾಣೆಗಳ ಮೂಲಕವೂ ದೂರು ದಾಖಲಿಸುವ ಅವಕಾಶ ಕಲ್ಪಿಸಲಾಗಿದೆ.<br><br>❖ ಸಾಮಾಜಿಕ ಜಾಲತಾಣಗಳ ಮೂಲಕ ಸೈಬರ್ ಆರ್ಥಿಕ ವಂಚನೆಗಳಿಗೆ ಬಲಿಯಾಗದಂತೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸಲಾಗುತ್ತಿದೆ. |
| (ಇ) | ಸೈಬರ್ ವಂಚನೆ ಪ್ರಕರಣಗಳನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು? (ವಿವರ ನೀಡುವುದು) | **ಸೈಬರ್ ಅಪರಾಧಗಳನ್ನು ತಡೆಗಟ್ಟಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ.**<br><br>❖ ಸೈಬರ್ ವಂಚನೆಗೊಳಗಾದ ಶೋಷಿತರ ಅನುಕೂಲಕ್ಕಾಗಿ ಪ್ರತಿ ಜಿಲ್ಲೆಯಲ್ಲಿ ಹಾಗೂ ನಗರ ವ್ಯಾಪ್ತಿಯಲ್ಲಿ ಒಂದೊಂದು ಸೈಬರ್ ಪೊಲೀಸ್ ಠಾಣೆಗಳನ್ನು (ಸಿ.ಇ.ಎನ್ ಪೊಲೀಸ್ ಠಾಣೆ) ಸ್ಥಾಪಿಸಿರುತ್ತದೆ. ಒಟ್ಟು 43 ಸಿ.ಇ.ಎನ್ ಪೊಲೀಸ್ ಠಾಣೆಗಳು ಕಾರ್ಯನಿರ್ವಹಿಸುತ್ತಿವೆ.<br><br>❖ ಅಲ್ಲದೆ ಪ್ರತಿ ಪೊಲೀಸ್ ಠಾಣೆಗಳಲ್ಲಿಯೂ ಸಹ ದೂರನ್ನು ಸ್ವೀಕರಿಸುವಂತೆ ಸೂಕ್ತ ಕ್ರಮ ಕೈಗೊಳ್ಳಲಾಗಿದೆ.<br><br>❖ ಸೈಬರ್ ಕ್ರೈಂ ಅಪರಾಧಗಳಿಗೆ ಸಂಬಂಧಿಸಿದಂತೆ ಸಾರ್ವಜನಿಕರಲ್ಲಿ ಅರಿವು ಮೂಡಿಸುವಲ್ಲಿ ಬಹಳಷ್ಟು ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಎಲ್ಲಾ ವರ್ಗದ ಜನಗಳಿಗೂ ಸಾಮಾಜಿಕ ಜಾಲತಾಣ ಮತ್ತು ಎಲ್ಲಾ ಮಾಧ್ಯಮಗಳಿಂದಲೂ ಸಹ ಸಾಮಾನ್ಯ ಜನರಿಗೆ ಅನುಕೂಲವಾಗುವ ರೀತಿಯಲ್ಲಿ ಅರಿವು ಮೂಡಿಸಲಾಗುತ್ತಿರುತ್ತದೆ.<br><br>❖ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಸಲುವಾಗಿ ಸಿಐಡಿ ಕಛೇರಿಯಲ್ಲಿ Centre for Cybercrime Investigation Training & Research (CCITR) ಘಟಕವನ್ನು ಪ್ರಾರಂಭಿಸಲಾಗಿದ್ದು, ಹಲವಾರು ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ.<br><br>❖ ಬ್ಯಾಂಕಿಂಗ್ ಅಪರಾಧಗಳಿಗೆ ಸಂಬಂಧಿಸಿದಂತೆ ಆರ್.ಬಿ.ಐ ಅಧಿಕಾರಿಗಳು, ಪೊಲೀಸ್ ಅಧಿಕಾರಿಗಳು ಹಾಗೂ ಬ್ಯಾಂಕ್ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ಬ್ಯಾಂಕಿಂಗ್ ಹಾಗೂ ಇತರೆ ಸೈಬರ್ ಅಪರಾಧಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಹಲವು ಪರಿಣಾಮಕಾರಿ ಸುರಕ್ಷತಾ ಕ್ರಮಗಳನ್ನು ಅನುಸರಿಸಿ ಸಾರ್ವಜನಿಕರ ಹಿತ ಕಾಪಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.<br><br>❖ ಸಿಐಡಿಯ ಕಛೇರಿಯ ಸಿಸಿಐಟಿಆರ್ ವಿಭಾಗದಲ್ಲಿ 2019 |

| | | |
|---|---|---|
| | | ರಿಂದ ಸರ್ಕಾರಿ ಸಂಸ್ಥೆಗಳು ನ್ಯಾಯಾಧೀಶರುಗಳಿಗೆ, ಕಾನೂನು ಅಭಿಯೋಜಕರಿಗೆ, ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಯವರುಗಳಿಗೆ ಸೈಬರ್ ಅಪರಾಧಗಳನ್ನು ತನಿಖೆ ಮತ್ತು ಪತ್ತೆ ಮಾಡುವ ಬಗ್ಗೆ ತರಬೇತಿಯನ್ನು ನೀಡಲಾಗಿರುತ್ತದೆ.<br><br>❖ ಸೈಬರ್ ಕ್ರೈಂ ಅಪರಾಧದ ಬಗ್ಗೆ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ಸೈಬರ್ ಕ್ರೈಂ ಅಪರಾಧ ಮತ್ತು ತನಿಖೆಗಾಗಿ ಸಂಬಂಧಿ ಸೈಬರ್ ಅಪರಾಧಗಳ ತನಿಖೆ ಕೈಪಿಡಿಯನ್ನು(Cyber Investigation Manual) ಮುದ್ರಿಸಿ ರಾಜ್ಯದ ಎಲ್ಲಾ ಘಟಕಗಳಿಗೆ, ಪೊಲೀಸ್ ಠಾಣೆಗಳಿಗೆ ಮತ್ತು ಇತರೆ ಕಾನೂನು ಜಾರಿ ಸಂಸ್ಥೆಗಳಿಗೆ ಕಳುಹಿಸಿಕೊಡಲಾಗಿದೆ.<br><br>❖ ರಾಜ್ಯದಲ್ಲಿ ಸುಸಜ್ಜಿತವಾದ ನ್ಯಾಯ ವಿಜ್ಞಾನ ಪ್ರಯೋಗಾಲಯವು ಕಾರ್ಯನಿರ್ವಹಿಸುತ್ತಿದ್ದು, ಸೈಬರ್ ಕ್ರೈಂ ಅಪರಾಧಗಳ ತನಿಖೆಗೆ ಸಂಬಂಧಿಸಿ ತಾಂತ್ರಿಕ ನೆರವು ನೀಡಲಾಗುತ್ತಿದೆ. |

ಸಂಖ್ಯೆ: ಹೆಚ್ 65 ಪಿಸಿಕ್ಯೂ 2024

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು